ಹೊನ್ನಾವರ ತಾಲ್ಲೂಕು ಹಾಗೂ ಭಟ್ಕಳ ತಾಲ್ಲೂಕುಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳ ಅವಶ್ಯಕತೆ

56(125) ಶ್ರೀ ಶಿವಾನಂದ ನಾಯಕ್ (ಭಟ್ಕಳ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ಹೊನ್ನಾವರ ತಾ: ಹಾಗೂ ಭಟ್ಕಳ ತಾಲ್ಲೂಕುಗಳಲ್ಲಿ ಎಲ್ಲೆಲ್ಲಿ ಸರ್ಕಾರಿ ಪ್ರೌಢಶಾಲೆಗಳ ಅವಶ್ಯಕತೆ ಇದೆ?

2) ಹೊನ್ನಾವರ ಹಾಗೂ ಭಟ್ಕಳಗಳಲ್ಲಿ ಯಾವ ಯಾವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶವಿದೆ?

3) ಭಟ್ಕಳ ಹಾಗೂ ಹೊನ್ನಾವರ ತಾಲ್ಲೂಕುಗಳಲ್ಲಿ ಈ ವರ್ಷ ಎಷ್ಟು ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

1) ಹೊನ್ನಾವರ ತಾಲ್ಲೂಕಿಗೆ ಹೆರಂಗಡಿಯಲ್ಲಿ ಉರ್ದು ಮಾಧ್ಯಮ ಪ್ರೌಢಶಾಲೆ ಭಟ್ಕಳ ತಾಲ್ಲೂಕಿನಲ್ಲಿ ಮುಂಡಳ್ಳಿ ಬೈಲೂರು ಹಾಗೂ ಕೋಣಾರ ಗ್ರಾಮಗಳಿಗೆ ಕನ್ನಡ ಮಾಧ್ಯಮ ಸರ್ಕಾರಿ ಪ್ರೌಢಶಾಲೆಗಳ ಅವಶ್ಯಕತೆ ಇರುತ್ತದೆ.

ಅ) ಹೊನ್ನಾವರ ಹಾಗೂ ಭಟ್ಕಳ ತಾಲ್ಲೂಕಿನ ಯಾವುದೇ ಹಿರಿಯ ಪ್ರಾಥಮಿಕ ಶಾಲೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಬಂದಿರುವುದಿಲ್ಲ.

ಆ) 1998-99ನೇ ಸಾಲಿನಲ್ಲಿ ಹೊನ್ನಾವರ ತಾ: ಹುಡ್ಕೆ ಹಾಗೂ ಗೇರುಸೊಪ್ಪಗಳಲ್ಲಿ ಸರ್ಕಾರಿ ಪ್ರೌಢಶಾಲೆ ಮಂಜೂರಾಗಿದೆ.

ಭಟ್ಕಳ ತಾಲ್ಲೂಕಿಗೆ ಈ ವರ್ಷದಲ್ಲಿ ಯಾವುದೇ ಸರ್ಕಾರಿ ಪ್ರೌಢಶಾಲೆ ಮಂಜೂರಾಗಿರುವುದಿಲ್ಲ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಮಾಧ್ಯಮ ವ್ಯಂದ ಬದಲಾವಣೆ ಕುರಿತು ನಿಯಮ.

57(129) ಶ್ರೀ ಶಿವಾನಂದ ನಾಯಕ್ (ಭಟ್ಕಳ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮರಾಠಿ ಮಾಧ್ಯಮದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಕನ್ನಡ ಮಾಧ್ಯಮಕ್ಕೆ ಬದಲಾವಣೆ ನೀಡಲು ರಾಜ್ಯ ಸರ್ಕಾರ ಅನುಸರಿಸುತ್ತಿರುವ ನಿಯಮಗಳೇನು?